# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಸಂಖ್ಯೆ : 464

ಸದಸ್ಯರ ಹೆಸರು : ಶ್ರೀ. ಪುಟ್ಟಣ್ಣ, (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16-12-2021.

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು.

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಬೋಧಕ ಸಿಬ್ಬಂದಿಗೆ ಕುಮಾರ್‌ನಾಯಕ್ ವರದಿಯನ್ವಯ ಇದುವರೆವಿಗೆ ಒಂದು ವೇತನ ಬಡ್ತಿ ನೀಡದಿರಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು) | ಶಿಕ್ಷಣ ಇಲಾಖೆ(ಪ್ರೌಢ ಶಿಕ್ಷಣ) ಆದೇಶ ಸಂಖ್ಯೆ: ಇಡಿ 78 ಎಸ್‌ಎಲ್‌ಬಿ 2016, ಬೆಂಗಳೂರು, ದಿನಾಂಕ:15.04.2016ರಲ್ಲಿ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರುಗಳಿಗೆ – "ಜೂನ್-2016ರಂದು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ" (ಪ್ರತಿ ಲಗತ್ತಿಸಿದೆ).<br><br>ಮುಂದುವರೆದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಶಿಕ್ಷಕರು ಮೇ/ಜೂನ್-2016 ರಿಂದ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ನೇರ ನೇಮಕಾತಿ ಹೊಂದಿ ಕಾರ್ಯನಿರ್ವಹಿಸುತ್ತಿರುವುದರಿಂದ ಸದರಿ ಬೋಧಕ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಆದೇಶದನ್ವಯ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನಿಯಮಾನುಸಾರ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಆ. | ಕುಮಾರ್‌ನಾಯಕ್ ವರದಿಯನ್ವಯ ಸದರಿ ಬೋಧಕ ಸಿಬ್ಬಂದಿಗೆ ಯಾವ ಕಾಲಮಿತಿಯಲ್ಲಿ ವೇತನ ಬಡ್ತಿ ನೀಡಲಾಗುವುದು? (ವಿವರ ನೀಡುವುದು) | ಶಿಕ್ಷಣ ಇಲಾಖೆ(ಪ್ರೌಢ ಶಿಕ್ಷಣ) ದಿನಾಂಕ:15.04.2016ರ ಆದೇಶದ ಅನುಸಾರ ಜೂನ್-2016ರಂದು ಕಾರ್ಯನಿರ್ವಹಿಸುತಿದ್ದ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಿ ಆದಷ್ಟು ಬೇಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: **MWD 283 LMQ 2021**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಕರ್ನಾಟಕ ರಾಜ್ಯ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡುವ ಬಗ್ಗೆ.

**ಉಲ್ಲೇಖ:–** 1) ಶ್ರೀ ಕುಮಾರ್ ನಾಯಕ್ ಅಂದಿನ ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ನೇತೃತ್ವದ ಸಮಿತಿಯ ವರದಿ.

2) ಸರ್ಕಾರದ ಆದೇಶ ಸಂಖ್ಯೆ:ಇಡಿ 264 ಎಸ್‌ಎಲ್‌ಬಿ 2012 ದಿನಾಂಕ:09–05–2012.

* * *

**ಪ್ರಸ್ತಾವನೆ:–**

ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಶ್ರೀ ಕುಮಾರ್ ನಾಯಕ್ ಅಂದಿನ ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನ್ವಯ ವೇತನ ಪರಿಷ್ಕರಣೆ ಮತ್ತು ಇತರೆ ಆರ್ಥಿಕ ಸೌಲಭ್ಯಗಳನ್ನು ಅನುಷ್ಠಾನಗೊಳಿಸುವಂತೆ ಕೋರುತ್ತಿದ್ದಾರೆ. ಈ ವರದಿಯನ್ನು ಅಧಿಕಾರಿ ವೇತನ ಸಮಿತಿಯು 2011ರಲ್ಲಿ ಪರಿಗಣಿಸಿದ್ದು, ವರದಿಯಲ್ಲಿನ ಶಿಫಾರಸ್ಸುಗಳನ್ನು ಅಧಿಕಾರಿ ವೇತನ ಸಮಿತಿಯು ಒಪ್ಪಿಕೊಂಡಿರುವುದಿಲ್ಲ.

ಮೇಲ್ಕಂಡ ಶಿಫಾರಸ್ಸಿನನ್ವಯ ಮೇಲೆ(2)ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ:09–05–2012ರಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ವಿಶೇಷ ವೇತನ ಭತ್ಯೆ ರೂ.200.00ಗಳನ್ನು ರೂ.400.00ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ರೂ.400.00ಗಳ ವಿಶೇಷ ವೇತನವನ್ನು ಮಂಜೂರು ಮಾಡಿದ್ದರೂ ಸಹ ಇತರ ಬೇಡಿಕೆಗಳನ್ನು ಪರಿಗಣಿಸುವಂತೆ ಸತತವಾಗಿ ಕೋರಿಕೆ ಸಲ್ಲಿಸುತ್ತಿದ್ದಾರೆ.

ಈ ಕುರಿತು ಸರ್ಕಾರದ ಮಟ್ಟದಲ್ಲಿ ವಿವಿಧ ಹಂತಗಳಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು. ಅಂತಿಮವಾಗಿ ದಿನಾಂಕ:13–04–2016ರಂದು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆಸಿದ ಉನ್ನತ ಮಟ್ಟದ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಿ, ಈ ಕೆಳಕಂಡಂತೆ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಯಿತು.

1. ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು:
2. ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಪ್ರಸ್ತುತ ನೀಡುತ್ತಿರುವ ರೂ.400/–ಗಳ ವಿಶೇಷ ಭತ್ಯೆಯನ್ನು ಮುಂದುವರೆಸುವುದು:

ದಿನಾಂಕ:01.08.2008ರಂದು ಅಥವಾ ನಂತರ ನೇಮಕಾತಿ ಹೊಂದಿದ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ರೂ.400/–ಗಳ ವಿಶೇಷ ಭತ್ಯೆಯ ಸೌಲಭ್ಯವನ್ನು ವಿಸ್ತರಿಸಲು ಕೋರಿರುವ ಬಗ್ಗೆ ಪ್ರಸಕ್ತ ಸಾಲಿನಲ್ಲಿ ಪರಿಶೀಲಿಸಲಾಗುವುದು.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳ ಸಂಘದ ಬೇಡಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಇಡಿ 78 ಎಸ್‌ಎಲ್‌ಬಿ 2016,</u>**
**<u>ಬೆಂಗಳೂರು, ದಿನಾಂಕ: 15.04.2016</u>**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರುಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರವು ಹರ್ಷಿಸುತ್ತದೆ.

1. ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ.
2. ದಿನಾಂಕ:01.08.2008ರ ಪೂರ್ವದಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲೆಯಲ್ಲಿ ನೇಮಕಾತಿಗೊಂಡು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ರೂ.400/-ಗಳ ವಿಶೇಷ ಭತ್ಯೆಯನ್ನು ಮುಂದುವರೆಸಲಾಗಿದೆ.
3. ತಮ್ಮ ವೇತನ ಶ್ರೇಣಿ ಅಂತಿಮ ಹಂತವನ್ನು ತಲುಪಿರುವ ಮುಖ್ಯ ಶಿಕ್ಷಕರು ಹಾಗೂ ಪ್ರೌಢಶಾಲಾ ಶಿಕ್ಷಕರುಗಳು ಮೇಲಿನಂತೆ ಮಂಜೂರು ಮಾಡಿರುವ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಮೇಲಿನ ಸೌಲಭ್ಯಗಳು ದಿನಾಂಕ:01.06.2016ರಿಂದ ಅಂದರೆ, 2016ರ ಜೂನ್ ತಿಂಗಳ ವೇತನದಿಂದ ಜಾರಿಗೆ ಬರುತ್ತದೆ.
5. ಆರ್ಥಿಕ ಹೊರೆಯನ್ನು ಒಳಗೊಂಡಿರದ ಸಂಘದ ಇತರ ಬೇಡಿಕೆಗಳನ್ನು ಶಿಕ್ಷಣ ಇಲಾಖೆಯು ಪರಿಶೀಲಿಸಲಿದೆ.
6. ಆರ್ಥಿಕ ಹೊರೆಯನ್ನು ಒಳಗೊಂಡಿರುವ ಸಂಘದ ಬೇಡಿಕೆಗಳನ್ನು ಮುಂದಿನ ವೇತನ ಸಮಿತಿ/ವೇತನ ಆಯೋಗದ ಮುಂದೆ ಮಂಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

15/4/16
(ಹೆಚ್.ಎಸ್. ಹೊನ್ನೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢಶಿಕ್ಷಣ).

<u>ಇವರಿಗೆ:-</u>
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು- ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ